ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2019 (2333)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ.ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಕುರಿತು

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳ ಪ್ರಯೋಜನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ತೆರೆಯಲಾಗಿದೆ; ಈ ಕೇಂದ್ರಗಳ ಮುಖ್ಯ ಉದ್ದೇಶ ಮತ್ತು ಕಾರ್ಯ ಚಟುವಟಿಕೆಗಳೇನು ; (ವಿವರ ನೀಡುವುದು)

(ಇ) ಈ ಇಲಾಖೆಯಿಂದ ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಕೈಗೊಂಡಿರುವ ಕಾರ್ಯಚಟುವಟಿಕೆಗಳೇನು ? (ಸಂಪೂರ್ಣ ವಿವರ ನೀಡುವುದು)